ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಬಾಕಿ ಹಣ ಬಿಡುಗಡೆಯ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) –

1140 (1215) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಜೇಷ್ಠತೆಯಲ್ಲಿ ಪರಿಗಣಿಸದೆ 375 ಕೋಟಿ ಮೊತ್ತದ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಿರುವ ಕುರಿತು ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡುವಲ್ಲಿ ಭ್ರಷ್ಟಾಚಾರ ಆಗಿರುವ ಕುರಿತು ಸರ್ಕಾರದ ನಿಲುವೇನು;

(ಆ) ಲೋಕೋಪಯೋಗಿ ಇಲಾಖೆಯಲ್ಲಿ 375 ಕೋಟಿ ಮೊತ್ತದ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಲು ಹಣ ಬಿಡುಗಡೆ ಮಾಡುವಾಗ ಯಾವ ಜಿಲ್ಲೆಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಗೆ ಬಿಡುಗಡೆ ಮಾಡಲಾದ ಮೊತ್ತವೆಷ್ಟು; ಸದರಿ ಮೊತ್ತವನ್ನು ಯಾವ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡಲು ಬಳಸಿಕೊಳ್ಳಲಾಗಿದೆ; (ಕಾಮಗಾರಿಯ ವಿವರ, ಸದರಿ ಕಾಮಗಾರಿ ಆರಂಭಗೊಂಡ ದಿನಾಂಕ, ಕಾಮಗಾರಿ ಮುಕ್ತಾಯಗೊಂಡ ದಿನಾಂಕ, ಅಂತಿಮ ಬಾಕಿ ಮೊತ್ತದ ಬಿಲ್ಲು ಪಾವತಿ ಮಾಡಲಾದ ದಿನಾಂಕ, ಗುತ್ತಿಗೆದಾರರ ವಿವರದೊಂದಿಗೆ ಮಾಹಿತಿ ನೀಡುವುದು)

(ಈ) ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿಗಳ ಬಾಕಿ ಹಣವನ್ನು ಪಾವತಿ ಮಾಡುವ ಸಮಯದಲ್ಲಿ ಹಾಸನ ಜಿಲ್ಲೆಯಲ್ಲಿ ಜೇಷ್ಠತೆಯ ಆಧಾರದಲ್ಲಿ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತ ಹಾಗೂ ಆದ್ಯತೆಯ ಆಧಾರದಲ್ಲಿ ಗುತ್ತಿಗೆದಾರರಿಗೆ ಪಾವತಿಸಿದ ಮೊತ್ತವೆಷ್ಟು? (ಗುತ್ತಿಗೆದಾರರ ಹೆಸರಿನೊಂದಿಗೆ ಮಾಹಿತಿ ನೀಡುವುದು)